ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಯಲಹಂಕ ವಲಯ

ಸಂಖ್ಯೆ:ಬೃ.ಬೆಂ.ಮ.ಪಾ/ಮು.ಅ/ತಾಂ.ಮ/ಯ.ವ/ಪಿ.ಆರ್/37 /2021–22

ಮುಖ್ಯಅಭಿಯಂತರವರ ಕಛೇರಿ
ಯಲಹಂಕ ವಲಯ,ಬೃ.ಬೆಂ.ಮ.ಪಾ.
ಬೆಂಗಳೂರು–92
ದಿನಾಂಕ: 26ನೇ ಜುಲೈ 2021

ತಾಂತ್ರಿಕ ಮಂಜೂರಾತಿ

ವಿಷಯ: Restoration and improvements of roads from Doddaballapura main road to Nagarjuna collage Balance main and cross roads of road to Nagarjuna collage, Kaveri layout, chowdappa layout Maruthinagara hariraja layout and surrounding areas in ward no-03 of Yelahanka new town sub division package no-12

ಉಲ್ಲೇಖ:
1. ಮಾನ್ಯ ಆಯುಕ್ತರವರ ಆದೇಶ ಸಂಖ್ಯೆ: ಬಿ12(1)ಪಿಆರ್/394/20–21, ದಿನಾಂಕ: 04–02–2021
2. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ:ನಅಇ–06ಎಂಎನ್‌ವೈ–2021, ದಿನಾಂಕ:29–04–2021

* * * * *

ಮೇಲಿನ ವಿಷಯದಲ್ಲಿ ತಿಳಿಸಿರುವ ಕಾಮಗಾರಿಗೆ ಉಲ್ಲೇಖ (2)ರಂತೆ ಆಡಳಿತಾತ್ಮಕ ಅನುಮೋದನೆ ನೀಡಿಕ್ಷಿಸಿದ್ದು, ಉಲ್ಲೇಖ (1)ರ ಮಾನ್ಯ ಆಯುಕ್ತರು ನಿಯೋಜಿಸಿರುವ ಅಧಿಕಾರ ಪ್ರತ್ಯಾಯೋಜನೆಯಂತೆ ಅಂದಾಜು ಪಟ್ಟಿಯನ್ನು ಪರಿಶೀಲಿಸಿ ರೂ.1000.00/–ಲಕ್ಷಗಳಿಗೆ (ರೂ ಹತ್ತು ಕೋಟಿ ಮಾತ್ರ) ತಾಂತ್ರಿಕ ಮಂಜೂರಾತಿಯ ಪುಸ್ತಕದ ಪುಟ ಸಂಖ್ಯೆ: 11 ರ ಕ್ರಮ ಸಂಖ್ಯೆ: 37 ರಲ್ಲಿ ನಮೂದಿಸಿ, ಈ ಕೆಳಗಿನ ಷರತ್ತುಗೊಳಪಡಿಸಿ ತಾಂತ್ರಿಕ ಮಂಜೂರಾತಿ ನೀಡಲಾಗಿದೆ.

ಸಹಿ/–
ಮುಖ್ಯ ಅಭಿಯಂತರರು (ಯಲಹಂಕ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಈ ಕೆಳಕಂಡ ನಿಬಂಧನೆ/ಷರತ್ತುಗಳನ್ನು ಕಾರ್ಯಪಾಲಕ ಅಭಿಯಂತರರು ರವರು ಕಡ್ಡಾಯವಾಗಿ ಪಾಲಿಸುವುದು

1. ಮಾನ್ಯ ಆಯುಕ್ತರವರ ಕಛೇರಿ ಸುತ್ತೋಲೆ ಸಂಖ್ಯೆ : ಆಯುಕ್ತರು/ಪಿಆರ್/176/15–16 ದಿನಾಂಕ: 22.12.2015 ರ ಆದೇಶದ ಮೇರೆಗೆ ಸದರಿ ಕಾಮಗಾರಿಯನ್ನು ಇನ್ಯಾವುದೆ ಅನುದಾನದ ಯೋಜನೆಯಲ್ಲಿ ಕೈಗೆತ್ತಿಗೊಂಡಿರುವುದಿಲ್ಲವೆಂದು ಅಥವಾ ಕಾಮಗಾರಿಗಳು ಪುನಾರವರ್ತಿತವಾಗಿಲ್ಲವೆಂದು ಹಾಗೂ ಈಗಾಗಲೇ ಚಾಲ್ತಿಯಲ್ಲಿರುವ/ಪೂರ್ಣಗೊಂಡಿರುವ ಕಾಮಗಾರಿಗಳು ಅಥವಾ ಲೋಕಾಯುಕ್ತ/ ಯಾವುದೇ ಇಲಾಖಾ ವಿಚಾರಣೆ ಹಂತದಲ್ಲಿರುವ ಕಾಮಗಾರಿಗಳು ಸದರಿ ಕ್ರಿಯಾ ಯೋಜನೆಯಲ್ಲಿ ಸೇರ್ಪಡೆಯಾಗಿರುವುದಿಲ್ಲವೆಂದು ಅಥವಾ ಪುನರಾವರ್ತಿತವಾಗಿಲ್ಲವೆಂದು, ಕಾಮಗಾರಿ ಪ್ರಾರಂಭವಾಗುವ ಪೂರ್ವದಲ್ಲೇ ಸಂಬಂಧಪಟ್ಟ ಕಾ.ಪಾ.ಅ/ಸ.ಕಾ.ಪಾ.ಅ/ವಾರ್ಡ್ ಅಭಿಯಂತರರು ಸ್ಥಳ ಪರಿಶೀಲಿಸಿ ದೃಢೀಕರಿಸಿ, ಖಚಿತಪಡಿಸಿಕೊಂಡ ನಂತರವಷ್ಟೆ ಸದರಿ ಕಾಮಗಾರಿಯನ್ನು ಅನುಷ್ಠಾನಗೊಳಿಸುವ ಷರತ್ತಿಗೊಳಪಡಿಸಿದೆ.
2. ಟೆಂಡರ್ ಆಹ್ವಾನಿಸುವ ಮುನ್ನ ಸಂಬಂಧಪಟ್ಟ ಸಮಿತಿಯಿಂದ ಅನುಮೋದನೆ ಪಡೆದು ನಿಯಮಾನುಸಾರ ಕ್ರಮಕೈಗೊಳ್ಳುವುದು.
3. ರೂ. 1.00ಲಕ್ಷಗಳಿಗಿಂತ ಮೇಲ್ಪಟ್ಟ ಎಲ್ಲಾ ಕಾಮಗಾರಿಗಳನ್ನು ಇ–ಪ್ರೋಕ್ಯೂರ್‌ಮೆಂಟ್ ಮುಖಾಂತರ ಕೈಗೊಳ್ಳುವುದು.
4. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡಿಟೊ ದರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
5. ಕಡತ ಪರಿಶೀಲನೆ ಹಾಗೂ ಕಾಮಗಾರಿ ಅನುಷ್ಠಾನಗೊಳಿಸುವ ಸಮಯದಲ್ಲಿ ಈ ಕೆಳಕಂಡ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸುವುದು.

ಮು.ತಿ.ನೋ...

- ಮು.ಅ(ಜಾ ಮತ್ತು ಪಿ.ಪಿ.ಇ.ಡಿ)/ಪಿಆರ್/18/12–13, ದಿನಾಂಕ: 19–01–2013
- ಪ್ರ.ಅ/ಪಿಆರ್/1040/13–14, ದಿನಾಂಕ: 04–09–2013
- ಆ/ಪ್ರ.ಅ/ಪಿಆರ್/7639/12–13, ದಿನಾಂಕ: 17–10–2012
- ಆ/ಪಿಆರ್/7844/12–13, ದಿನಾಂಕ: 09–01–2013

6. ಕರ್ನಾಟಕ ಸರ್ಕಾರ ಆದೇಶ ಸಂಖ್ಯೆ: ಆಇ 876 (ಪಿ–1) ವೆಚ್ಚ–12/17, ದಿನಾಂಕ: 12–10–2017ರಂತೆ ಕಡ್ಡಾಯವಾಗಿ ರೂ. 50.00 ಲಕ್ಷಗಳನ್ನು ಮೀರದ ಕಾಮಗಾರಿಗಳಿಗೆ ಟೆಂಡರ್ ಆಹ್ವಾನಿಸುವ ಸಮಯದಲ್ಲಿ Randomization ಮೂಲಕ ಕಾಮಗಾರಿಗಳನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಮೀಸಲಿಡುವ ಸಂಬಂಧ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವುದು.
7. ಮಾನ್ಯ ಆಯುಕ್ತರು ರವರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ: ಬಿಬಿಎಂಪಿ/ಆ/ಪಿಆರ್/6166/2019–20, ದಿನಾಂಕ: 13–12–2019ರಂತೆ ಸೂಕ್ತ ಕ್ರಮಕೈಗೊಳ್ಳುವುದು.
8. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ಅಧಿನಿಯಮ–1999 ಮತ್ತು ನಿಯಮ–2000 ಹಾಗೂ ಸರ್ಕಾರ ನಿಗಧಿಪಡಿಸಿರುವ Standard Bidding Documents ಅನ್ನು ಅಳವಡಿಸಿಕೊಂಡು ನಿರ್ವಹಿಸುವುದು.
9. ಇಡಿಗಂಟು (Lumpsum/Miscellaneous Amount) ವೆಚ್ಚದ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯುವುದು.
10. ಸಕ್ಷಮ ಪ್ರಾಧಿಕಾರದಿಂದ ಕರಡು ಟೆಂಡರ್ ಪ್ರತಿಯನ್ನು ಅನುಮೋದನೆ ಪಡೆಯುವುದು.
11. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
12. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೋಟೆಷನ್ ಕರೆದು ಅನುಮೋದನೆ ಪಡೆಯುವುದು.
13. ರಸ್ತೆ ಇತಿಹಾಸ ಪುಸ್ತಕದಲ್ಲಿ ಕಾಮಗಾರಿಯ ಕೆಲಸಗಳಾದ ಚಿಪ್‌ಕಾರ್ಪೆಟಿಂಗ್, ಜಿಲ್ಲಿರಸ್ತೆ, ಡಾಂಬರೀಕರಣದ ಕೆಲಸವನ್ನು ನಮೂದಿಸುವುದು.
14. ರಸ್ತೆಗೆ ಬಿ.ಎಂ/ಡಿ.ಬಿ.ಎಂ ಹಾಕಿದ್ದಲ್ಲಿ Benkelman Beam Deflection report ನ್ನು ಕಡ್ಡಾಯವಾಗಿ ಸಲ್ಲಿಸಲು ಸೂಚಿಸಿದೆ.
15. ನಿಗಧಿತ ಅವಧಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸುವುದು. ಸಾಧ್ಯವಾಗದ ಪಕ್ಷದಲ್ಲಿ ಕಾಲಾವಧಿ ವಿಸ್ತರಣೆಯನ್ನು ಸೂಕ್ತ ಸಮಜಾಯಿಷಿಯೊಂದಿಗೆ/ವಿವರವಾದ ಸಮಂಜಸ ವರದಿ ನೀಡಿ ಕಾಲಾವಧಿ ವಿಸ್ತರಣೆ ಪಡೆಯುವುದು.
16. ಸದರಿ ಕೈಗೊಳ್ಳುವ ಕಾಮಗಾರಿಯು ಪುನರಾವರ್ತನೆ ಅಥವಾ ನಕಲು ಆಗಿರುವುದಿಲ್ಲವೆಂಬ ಬಗ್ಗೆ ಸಂಬಂಧಪಟ್ಟ ಅಭಿಯಂತರರು ಟಿಪ್ಪಣಿ ಹಾಳೆಯಲ್ಲಿ ಹಾಗೂ ಅಂದಾಜು ಪಟ್ಟಿಯಲ್ಲಿ ದೃಢೀಕರಿಸುವುದು.
17. ಮೇಲಾಧಿಕಾರಿಗಳಿಗೆ ಮಾಹಿತಿ ಒದಗಿಸುವಲ್ಲಿ ಮರೆಮಾಚಿದಲ್ಲಿ ಹಾಗೂ ಅಂದಾಜು ಪಟ್ಟಿ ತಯಾರಿಸುವಲ್ಲಿ ಯಾವುದಾದರೂ ಲೋಪದೋಷಗಳು ಕಂಡು ಬಂದಲ್ಲಿ, ಸಂಬಂಧಪಟ್ಟ ವಾರ್ಡಿನ ಸಹಾಯಕ ಅಭಿಯಂತರರು/ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು/ಕಾರ್ಯಪಾಲಕ ಅಭಿಯಂತರರನ್ನು ನೇರ ಜವಾಬ್ದಾರರನ್ನಾಗಿ ಮಾಡಲಾಗುವುದು.
18. ಕಾಮಗಾರಿಯ ಗುಣಮಟ್ಟವನ್ನು ಕಾಯ್ದಿರಿಸುವ ಬಗ್ಗೆ ಸಂಬಂಧಪಟ್ಟ ವಾರ್ಡಿನ ಸಹಾಯಕ ಅಭಿಯಂತರರು/ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು/ಕಾರ್ಯಪಾಲಕ ಅಭಿಯಂತರರನ್ನು ನೇರ ಜವಾಬ್ದಾರರನ್ನಾಗಿ ಮಾಡಲಾಗುವುದು

ಮುಖ್ಯ ಅಭಿಯಂತರರು (ಯಲಹಂಕ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1) ಕಾರ್ಯಪಾಲಕ ಅಭಿಯಂತರರು (ಯಲಹಂಕ)ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ರವಾನಿಸಿದೆ.
2) ಕಛೇರಿ ಕಡತಕ್ಕೆ.